# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 511 (707) |
| ಸದಸ್ಯರ ಹೆಸರು: | ಶ್ರೀ ಹೆಚ್. ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ: | 13.12.2024 |
| ಉತ್ತರಿಸುವವರು: | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಕೃಷಿ ತೆರಿಗೆ ನಿರ್ಧರಣೆಗೆ ಒಳಪಟ್ಟಿರುವ ಎಲ್ಲಾ ಭೂಮಿ ಮತ್ತು ಕಟ್ಟಡಗಳ ಮ್ಯಾನ್ಯುಯಲ್ ಸಮೀಕ್ಷೆ ತ್ವರಿತವಾಗಿ ಮಾಡಿ ಪಂಚತಂತ್ರ 2.0 ತಂತ್ರಾಂಶದಲ್ಲಿ ಅಳವಡಿಸಲು ಆದೇಶಿಸಲಾಗಿದೆಯೇ; | ರಾಜ್ಯದ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಕೃಷಿ ತೆರಿಗೆ ನಿರ್ಧರಣೆಗೆ ಒಳಪಟ್ಟಿರುವ ಎಲ್ಲಾ ಭೂಮಿ ಮತ್ತು ಕಟ್ಟಡಗಳ ಮ್ಯಾನ್ಯುಯಲ್ ಸಮೀಕ್ಷೆ ಆದೇಶವನ್ನು ಹೊರಡಿಸಲಾಗಿದೆ. ಆದೇಶದ ಪ್ರತಿಯನ್ನು ಲಗತ್ತಿಸಿದೆ. |
| (ಆ) | ಸದರಿ ಆದೇಶದ ನಂತರ ಬೆಂಗಳೂರು ನಗರ ಜಿಲ್ಲೆಯಲ್ಲಿ ಇಲ್ಲಿಯವರೆಗೆ ಪಂಚತಂತ್ರ 2.0 ತಂತ್ರಾಂಶದಲ್ಲಿ ಅಳವಡಿಸಲಾದ ಆಸ್ತಿಗಳ ಸಂಖ್ಯೆ ಎಷ್ಟು; | ಸದರಿ ಆದೇಶದ ನಂತರ ಬೆಂಗಳೂರು ನಗರ ಜಿಲ್ಲೆಯಲ್ಲಿ ಮ್ಯಾನ್ಯುಯಲ್ ಸಮೀಕ್ಷೆ ನಡೆಸಿ ಒಟ್ಟು 7,76,893 ಆಸ್ತಿಗಳನ್ನು ಗುರುತಿಸಲಾಗಿದೆ. ಅದರಲ್ಲಿ, 7,24,194 ಆಸ್ತಿಗಳಿಗೆ ಪಂಚತಂತ್ರ 2.0 ತಂತ್ರಾಂಶದಲ್ಲಿ ಮಾಹಿತಿಯನ್ನು ಅಳವಡಿಸಲಾಗಿದೆ. ಉಳಿದ ಆಸ್ತಿಗಳನ್ನು ಪಂಚತಂತ್ರ 2.0 ತಂತ್ರಾಂಶದಲ್ಲಿ ಅಳವಡಿಸಲು ಕ್ರಮಕೈಗೊಳ್ಳಲಾಗುತ್ತಿದೆ. |
| (ಇ) | ಬೆಂಗಳೂರು ನಗರ ಜಿಲ್ಲೆಯ ಹಲವು ಗ್ರಾಮ ಪಂಚಾಯತಿಗಳು ಹಸಿರು ಪಟ್ಟಿ ವಲಯದಲ್ಲಿರುವ ಕಾರಣ ನೀಡಿ ಹಲವು ವರ್ಷಗಳ ಹಿಂದೆ ಕಟ್ಟಡ/ನಿವೇಶನ ನಿರ್ಮಿಸಿದ ಸರ್ಕಾರದ ಬೀದಿ ದೀಪ, ರಸ್ತೆ, ಕುಡಿಯುವ ನೀರು ಇನ್ನಿತರ ಎಲ್ಲಾ ಸೌಲಭ್ಯ ಪಡೆಯುತ್ತಿದ್ದರೂ, ಪಂಚತಂತ್ರ ತೆರಿಗೆ ನಿರ್ಧರಣಾ ಪಟ್ಟಿಯಲ್ಲಿ ಸೇರ್ಪಡೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |

| | | |
|---|---|---|
| (ಈ) | ಬಂದಿದ್ದಲ್ಲಿ, ಸದರಿ ನಿವೇಶನ/ ಕಟ್ಟಡಗಳನ್ನು ತೆರಿಗೆ ನಿರ್ಧರಣೆ ವ್ಯಾಪ್ತಿಗೆ ಸೇರ್ಪಡೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು? | ಸರ್ಕಾರದ ಪರಿಶೀಲನೆಯಲ್ಲಿದೆ. |

ಸಂ: ಗ್ರಾಅಪ/157/ಇ-ಆಡಳಿತ/2024

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ
ತಂತ್ರಜ್ಞಾನ ಸಚಿವರು.